## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಪ್ರಭಾರ ಭತ್ಯೆ ದರವನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ : ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ **08** ಎಸ್‌ಆರ್‌ಎಸ್ **2018,** ದಿನಾಂಕ: **30/04/2019.**

***

ಪ್ರಸ್ತಾವನೆ:

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 32 ಮತ್ತು 68 ರಡಿಯಲ್ಲಿ ಸರ್ಕಾರಿ ನೌಕರರನ್ನು ಸ್ವತಂತ್ರ ಪ್ರಭಾರದಲ್ಲಾಗಲೀ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದಾಗ ಆ ಹುದ್ದೆಯ ವೇತನ ಶ್ರೇಣಿಯ ಕನಿಷ್ಠ ಹಂತದಲ್ಲಿ ಮೂರು ತಿಂಗಳವರೆಗೆ ಶೇಕಡ 7.5 ದರದಲ್ಲಿ, ಆ ನಂತರದ ಮೂರು ತಿಂಗಳಿಗಿಂತ ಹೆಚ್ಚಿನ ಅವಧಿಗೆ ಶೇಕಡ 15 ರ ದರದಲ್ಲಿ ಪ್ರಭಾರ ಭತ್ಯೆಯನ್ನು ನಿಗಧಿಪಡಿಸಿ ಆದೇಶಿಸಲಾಗಿತ್ತು.

ಪ್ರಸ್ತುತ, ಸರ್ಕಾರದ ಇಲಾಖೆಗಳಲ್ಲಿ ಸಾಕಷ್ಟು ಹುದ್ದೆಗಳು ಖಾಲಿ ಇದ್ದು, ಸುಗಮ ಆಡಳಿತಕ್ಕಾಗಿ ಹಲವಾರು ಸಿಬ್ಬಂದಿಗಳನ್ನು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಲ್ಲಿ ಅಧಿಕ ಪ್ರಭಾರ/ಸಮವರ್ತಿ ಪ್ರಭಾರದಲ್ಲಿರಿಸಲಾಗಿದೆ. ಸದರಿ ಅಧಿಕಾರಿಗಳು ಹೆಚ್ಚಿನ ಕಾರ್ಯಭಾರದ ಒತ್ತಡದಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ. ಈ ಅಧಿಕಾರಿ/ನೌಕರರುಗಳಿಗೆ ಪ್ರಭಾರ ಭತ್ಯೆ ಮಂಜೂರು ಮಾಡಲು ಹಾಲಿ ಅನುಸರಿಸುತ್ತಿರುವ ಕಾರ್ಯವಿಧಾನದ ಜಟಿಲತೆಯಿಂದಾಗಿ ಹಲವು ಸಂದರ್ಭಗಳಲ್ಲಿ ಪ್ರಭಾರ ಭತ್ಯೆ ಪಡೆಯುವುದು ಬಹಳ ಕಷ್ಟಕರವಾಗುತ್ತಿದೆ. ಈ ಕಾರ್ಯವಿಧಾನವನ್ನು ಸರಳಗೊಳಿಸುವ ನಿಟ್ಟಿನಲ್ಲಿ ಪ್ರಸ್ತುತ ಎರಡು ಹಂತದಲ್ಲಿ ನೀಡುತ್ತಿರುವ ಪ್ರಭಾರ ಭತ್ಯೆಯನ್ನು ವಿಲೀನಗೊಳಿಸಿ ಒಂದೇ ಹಂತದಲ್ಲಿ ನೀಡುವ ಬಗ್ಗೆ ಸ್ವೀಕೃತವಾದ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 14 (ಇ) ಎಸ್‌ಆರ್‌ಎಸ್ 2022, ಬೆಂಗಳೂರು, ದಿನಾಂಕ:23/09/2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 32 ಮತ್ತು 68 ರಡಿಯಲ್ಲಿ ಸರ್ಕಾರಿ ಅಧಿಕಾರಿ/ನೌಕರರನ್ನು ಸ್ವತಂತ್ರ ಪ್ರಭಾರದಲ್ಲಿ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯಲ್ಲಿ ಹೆಚ್ಚಿನ ಪ್ರಭಾರದಲ್ಲಿರಿಸಿದ ಸಂದರ್ಭದಲ್ಲಿ ಅಂತಹ ಪ್ರಭಾರದಲ್ಲಿರಿಸಿದ ಅಧಿಕಾರಿಯ ಮೂಲ ವೇತನದ ಶೇಕಡ 15 (ಶೇಕಡ ಹದಿನೈದು) ರ ದರದಲ್ಲಿ ಪ್ರಭಾರ ಭತ್ಯೆಯನ್ನು ನಿಗಧಿಪಡಿಸಿ ಆದೇಶಿಸಲಾಗಿದೆ. ಪ್ರಭಾರ ಭತ್ಯೆಯನ್ನು ಮಂಜೂರು ಮಾಡುವ ಸಂದರ್ಭದಲ್ಲಿ ಈ ಕೆಳಕಂಡ ಅಂಶಗಳನ್ನು ಪರಿಗಣಿಸತಕ್ಕದ್ದು:

ಅ) ಪ್ರಭಾರ ಭತ್ಯೆಯನ್ನು ಪ್ರತಿ ಮಾಸಿಕ ವೇತನದ ಬಿಲ್ಲಿನೊಂದಿಗೆ ಪಾವತಿಸತಕ್ಕದ್ದು.

ಆ) ಪ್ರಭಾರ ಭತ್ಯೆಯನ್ನು ಪ್ರಭಾರದಲ್ಲಿರಿಸಿದ ಹುದ್ದೆಗೆ ಸಂಬಂಧಪಟ್ಟ DDO ಅಥವಾ ವರದಿ ಪ್ರಾಧಿಕಾರವು (Reporting Authority) ಯಾವುದು ಉನ್ನತವೋ ಅಂತಹ ಅಧಿಕಾರಿ ಮಂಜೂರು ಮಾಡತಕ್ಕದ್ದು.

ಇ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ನೇಮಿಸಲಾಗುವ ಇಲಾಖಾ ಮುಖ್ಯಸ್ಥರ ಹಂತದಲ್ಲಿನ ಪ್ರಭಾರದ ಸಂದರ್ಭದಲ್ಲಿ ಪ್ರಭಾರ ಭತ್ಯೆಯನ್ನು ಮಂಜೂರು ಮಾಡಲು/ಡ್ರಾ ಮಾಡಲು ಇಲಾಖಾ ಮುಖ್ಯಸ್ಥರು ಸಕ್ಷಮರಾಗಿರುತ್ತಾರೆ.

..ಪುಟ-2ಕ್ಕೆ

ಈ) ಸಚಿವಾಲಯದ ಅಧಿಕಾರಿ/ಸಿಬ್ಬಂದಿಗಳಿಗೆ ಸಂದರ್ಭಾನುಸಾರ ಸಿ.ಆ.ಸು. ಇಲಾಖೆ (ಲೆಕ್ಕಪತ್ರ)/ ಐ.ಆರ್.ಎಲ್.ಎ. ಶಾಖೆಗಳಿಂದ ಮಾಸಿಕ ವೇತನದ ಬಿಲ್‌ಗಳೊಂದಿಗೆ ಪ್ರಭಾರ ಭತ್ಯೆಯನ್ನು ಸೆಳೆದು ಪಾವತಿಸತಕ್ಕದ್ದು.

ಉ) ಪ್ರಭಾರ ಭತ್ಯೆಯ ಪರಿಷ್ಕೃತ ದರಗಳು ದಿನಾಂಕ: 01/09/2022 ರಿಂದ ಜಾರಿಗೆ ಬರತಕ್ಕದ್ದು. ಪ್ರಸ್ತುತ ಇತ್ಯರ್ಥವಾಗದಿರುವ ಪ್ರಭಾರ ಭತ್ಯೆಯ ಕ್ಲೇಮುಗಳನ್ನು ಮೇಲಿನ ವಿಧಾನದಂತೆ ಇತ್ಯರ್ಥಪಡಿಸತಕ್ಕದ್ದು.

ಉಳಿದಂತೆ, ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 32 ಮತ್ತು 68 ರ ಎಲ್ಲಾ ಷರತ್ತು ಮತ್ತು ಉಪಬಂಧಗಳು ಅನ್ವಯವಾಗಲಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಅಜಯ್ ಎಸ್. ಕೊರಡೆ)**
**ಸರ್ಕಾರದ ಅಧೀನ ಕಾರ್ಯದರ್ಶಿ**
**ಆರ್ಥಿಕ ಇಲಾಖೆ (ಸೇವೆಗಳು-1)**

**ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ - ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.**

**ಪ್ರತಿ ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560 001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ.
9. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.

..ಪುಟ-3ಕ್ಕೆ

11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
19. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು/ಆರ್ಥಿಕ ಇಲಾಖೆ (ಸೇವೆಗಳು-3), (ಈ ಮಾರ್ಪಾಡನ್ನು ಕೆ.ಸಿ.ಎಸ್.ಆರ್. ನಿಯಮಾವಳಿಯಲ್ಲಿ ಅಳವಡಿಸಲು ಸೂಕ್ತ ಕ್ರಮ ಕೈಗೊಳ್ಳಲು)
20. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
21. ವಾರಪತ್ರ/ಶಾಖಾ ರಕ್ಷಾ ಕಡತ/ web portal

**[ಕ್ರಮ ಸಂಖ್ಯೆ:1 ರಿಂದ 16 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ]**

**ಕರ್ನಾಟಕ ಸರಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.**